## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೇಸಿಗೆ ಕಾಲದಲ್ಲಿ ತಾಪಮಾನ ಹೆಚ್ಚಾಗಿರುವುದರಿಂದ ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗದ ಜಿಲ್ಲೆಗಳಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಕೂಲಿಕಾರರಿಗೆ ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ನೀಡುವ ಕುರಿತು.

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿಸಿ-ಇಜಿಎಸ್/172/2022, ಬೆಂಗಳೂರು, ದಿನಾಂಕ:01-04-2022.

********

**ಪ್ರಸ್ತಾವನೆ:**

ಬೇಸಿಗೆ ಅವಧಿಯಲ್ಲಿ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ತಾಪಮಾನ ತೀವ್ರವಾಗಿರುವುದರಿಂದ ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗದ ಜಿಲ್ಲೆಗಳಲ್ಲಿ 2022-23ನೇ ಸಾಲಿಗೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಕೂಲಿಕಾರರಿಗೆ ನಿಗದಿತ ಕೂಲಿ ಪಡೆಯಲು ನಿರ್ದಿಷ್ಟಪಡಿಸಲಾದ ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ನೀಡಿ ಉಲ್ಲೇಖದನ್ವಯ ಆದೇಶಿಸಲಾಗಿತ್ತು. ಪ್ರಸ್ತುತ ಬೇಸಿಗೆ ಸಮೀಪಿಸುತ್ತಿದ್ದು, ತಾಪಮಾನವು ಈಗಾಗಲೇ ಹೆಚ್ಚಾಗುತ್ತಿರುವುದರಿಂದ ಯೋಜನೆಯಡಿ ನಿಗದಿಪಡಿಸಲಾದ ಕೆಲಸದ ಪ್ರಮಾಣವನ್ನು ನಿರ್ವಹಿಸುವುದು ಕಷ್ಟವಾಗುತ್ತದೆ. ಈ ಹಿನ್ನಲೆಯಲ್ಲಿ 2023-24ನೇ ಸಾಲಿಗೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಕೂಲಿಕಾರರಿಗೆ ನಿಗದಿತ ಕೂಲಿ ಪಡೆಯಲು ನಿರ್ದಿಷ್ಟಪಡಿಸಲಾದ ಕೆಲಸದ ಪ್ರಮಾಣದಲ್ಲಿ ರಿಯಾಯಿತಿ ನೀಡಲು ರಾಜ್ಯ ಸರ್ಕಾರವು ನಿರ್ಧರಿಸಿರುತ್ತದೆ. ಅದರಂತೆ, ಈ ಆದೇಶ.

### ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿಸಿ-ಇಜಿಎಸ್/172/2022, ಬೆಂಗಳೂರು, ದಿನಾಂಕ:28-03-2023

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನಲೆಯಲ್ಲಿ 2023-24ನೇ ಸಾಲಿಗೆ ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗದ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೂಲಿಕಾರರಿಗೆ ನಿಗದಿಪಡಿಸಿದ ಕೆಲಸದ ಪ್ರಮಾಣದಲ್ಲಿ ಈ ಕೆಳಕಂಡಂತೆ ರಿಯಾಯಿತಿ ನೀಡಿ ಆದೇಶಿಸಿದೆ.

| ಕ್ರ ಸಂ | ಬೇಸಿಗೆ ಕಾಲದ ಅವಧಿ | ಕಾಮಗಾರಿಯ ಕೆಲಸದ ಪ್ರಮಾಣದಲ್ಲಿ ನೀಡುವ ಶೇಕಡಾ ರಿಯಾಯಿತಿ |
|---|---|---|
| 1 | ಏಪ್ರಿಲ್ 2023 | ಶೇ. 30ರಷ್ಟು |
| 2 | ಮೇ 2023 | ಶೇ. 30ರಷ್ಟು |
| 3 | ಜೂನ್ 2023 | ಶೇ. 20ರಷ್ಟು |

ಹಿರಿಯ ನಾಗರೀಕರು, ವಿಶೇಷ ಚೇತನರು, ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಈಗಾಗಲೇ ಕೆಲಸದ ಪ್ರಮಾಣದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಲಾಗಿದ್ದು, ಮೇಲ್ಕಂಡ ಹೆಚ್ಚುವರಿ ರಿಯಾಯಿತಿಯು ಸದರಿಯವರಿಗೆ ಅನ್ವಯಿಸುವುದಿಲ್ಲ.

ಕಾಮಗಾರಿ ಸ್ಥಳದಲ್ಲಿ ಕೂಲಿಕಾರರಿಗೆ ಕಡ್ಡಾಯವಾಗಿ ನೆರಳು, ಶುದ್ಧ ಕುಡಿಯುವ ನೀರು, ಪ್ರಥಮ ಚಿಕಿತ್ಸೆ ಪೆಟ್ಟಿಗೆ ಇತ್ಯಾದಿ ಮೂಲ ಸೌಕರ್ಯಗಳನ್ನು ಕಡ್ಡಾಯವಾಗಿ ಒದಗಿಸಲು ಕ್ರಮವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

28/3/23
(ರಘುನಾಥಗೌಡ ಎಸ್. ಪಾಟೀಲ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು.

2. ನಿರ್ದೇಶಕರು, ಸಾಮಾಜಿಕ ಪರಿಶೋಧನಾ ನಿರ್ದೇಶನಾಲಯ, ಶೇಷಾದ್ರಿಪುರಂ, ಬೆಂಗಳೂರು.
3. ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಮುಖ್ಯ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
6. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
7. ಜಂಟಿ ನಿರ್ದೇಶಕರು (ಆಡಳಿತ/ತಾಂತ್ರಿಕ/ತೋಟಗಾರಿಕೆ/ಕೃಷಿ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
8. ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
9. ಸಹಾಯಕ ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ.
10. ಕಲ್ಬುರ್ಗಿ ಮತ್ತು ಬೆಳಗಾವಿ ವಿಭಾಗದ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.